**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,**

**ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)**

**ವಾರ್ಡ್ ಸಮಿತಿ ಸಭೆ, ದಿನಾಂಕ:06-06-2022 ರ ಸಭಾ ನಡವಳಿ**

**ಸಂಖ್ಯೆ:**ಸ.ಕಾನಿ.ಅ (ಪು.ನ)/ಪಿಆರ್/04/22-23

ದಿನಾಂಕ: 06-06-2022 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri Nagaraj | Tax Inspector |
| 4. | Smt.Suguna | Tax Inspector |
| 5. | Sri Venkatesh | Horticulture Inspector |
| 6. | Sri Ragavendra | PSI D J Halli Police Station |
| 7. | Sri. Mallesh | BESCOM |
| 8. | Sri.Mahesh Kumar. M | Sanitary Dhafedhar |
| 9. | Sri Suresh | Ward Committee Member |
| 10. | Sri Syed Ansar Pasha | Ward Committee Member |
| 11. | Sri Gopinath | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 20-05-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ 47, ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ಇತ್ತೀಚಿಗೆ ಸುರಿದ ಬಾರಿ ಮಳೆಯಿಂದಾಗಿ ಮನೆಯೊಳಗೆ ನೀರು ನುಗ್ಗಿ ತೊಂದರೆಗೆ ಒಳಗಾದ ಸಾರ್ವಜನಿಕರಿಗೆ ಸರ್ಕಾರದಿಂದ ಸಿಗಬಹುದಾದ ಸವಲತ್ತು / ಹಣಕಾಸಿನ ಸೌಲಭ್ಯವನ್ನು ಒದಗಿಸಿಕೊಡುವಂತೆ ವಾರ್ಡು ಸಮಿತಿ ಸಭೆಯಲ್ಲಿ ಸೈಯಾದ್ ಅನ್ಸರ್ ಪಾಷ ರವರು ತಿಳಿಸಿರುತ್ತಾರೆ. ಆದರೆ ಸರ್ಕಾರಿ ಮಾನದಂಡನೆಗಳಂತೆ ಮಳೆಯಿಂದಾಗಿರುವ ನಷ್ಟಗಳಿಗೆ ಸಂಬಂಧಪಟ್ಟಂತೆ GEO TAG Photos ಗಳೊಂದಿಗೆ ಪ್ರಸ್ತಾವನೆ ಸಲ್ಲಿಸದಲ್ಲಿ ಕಂದಾಯ ಇಲಾಖೆವತಿಯಿಂದ ಅಗತ್ಯಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಲಾಗಿರುತ್ತದೆ.

2. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮೋದಿ ರಸ್ತೆ ಹಾಗೂ ಸರ್ಕಾರಿ ಉರ್ದು ಕಿರಿಯ ಶಾಲೆಯ ಹತ್ತಿರ ವಿದ್ಯುತ್ ಪರಿವರ್ತನೆ (T C) ಹಾಕಲು ಈಗಾಗಲೇ ಪ್ರಸ್ತಾವಣೆಯನ್ನು ಸಲ್ಲಿಸಲಾಗಿದ್ದು, ಸದರಿ ಟಿ.ಸಿ ಗಳನ್ನು ವಾರ್ಡಿನ ಸಹಾಯಕ ಅಭಿಯಂತರರೊಂದಿಗೆ ಸ್ಥಳ ಪರಿಶೀಲಿಸಿ ಕೂಡಲೇ ಟಿ.ಸಿ.ಗಳನ್ನು ಅಳವಡಿಸಲು ಕ್ರಮಕೈಗೊಳ್ಳುವಂತೆ ಶ್ರೀ.ಪ್ರಭಾಕರ್ AEE C5 BECOM ರವರಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಶ್ರೀನಿವಾಸನಗರ, ಮೋದಿ ರಸ್ತೆ ಹಾಗೂ ಕೆಲವು ಕಡೇ ಬೀದಿ ದೀಪಗಳು (Street Light) ದುರಸ್ಥಿಗೊಳಸುವಂತೆ ಹಗೂ ಅವಶ್ಯಕವಿರುವ ಕಡೆ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಬೀದಿ ದೀಪಗಳ ಉಸ್ತುವಾರಿ ಸೈಪ್ ರವರಿಗೆ ಸೂಚಿಸಲಾಯಿತು.

Scanned with CamScanner

4. ವಾರ್ಡ್ ವ್ಯಾಪ್ತಿಯ ಮೋದಿ ರಸ್ತೆಯ ಎರಡು ಕಡೆಗಳಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕ ಸಂಚಾರಕ್ಕಡೆ ತುಂಬಾ ತೊಂದರೆ ಆಗುತ್ತಿರುವುದನ್ನು ವಾರ್ಡ್ ಸಭೆಯಲ್ಲಿ ತಿಳಿಸಿದ್ದು, ಇದನ್ನು ತೆರವುಗೊಳಸಲು ಪಾದಚಾರಿ ಮಾರ್ಗದ ತೆರವುಗೊಳಸಲು ಒಂದು ದಿನಾಂಕ ನಿಗಧಿಪಡಿಸಿ ಸಂಚಾರ ಪೋಲೀಸ್ ಇಲಾಖೆ, ಕಿರಿಯ ಆರೋಗ್ಯ ನಿರೀಕ್ಷರು, ಮಾರ್ಷಲ್‌ಗಳು ಹಾಗೂ ಸಹಾಯಕ ಅಭಿಯಂತರೊಂದಿಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

ಸಹಿ
(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
20 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ವಾರ್ಡ್ ವ್ಯಾಪ್ತಿಯ ಎಲ್ಲಾ ವೆಲ್‌ಫೇರ್ ಅಸೋಷಿಯನ್ಸ್ ರವರಿಗೆ.
11. ಕಛೇರಿ ಕಡತಕ್ಕೆ.

Scanned with CamScanner